# ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ:ಎ8/ಎಸ್ಎಸ್ಎಲ್‌ಸಿ/ಮು.ಪ.ಫ/02/2023-24 ದಿನಾಂಕ:07.05.2023

**:: ಸುತ್ತೋಲೆ ::**

ವಿಷಯ:- ಮಾರ್ಚ್/ಏಪ್ರಿಲ್ 2023ರ ಮಾಹೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಹಾಗೂ ಫಲಿತಾಂಶ ಪಟ್ಟಿ ಪರಿಶೀಲನೆ ಕುರಿತು.

*****

ಮಾರ್ಚ್/ಏಪ್ರಿಲ್ 2023ರ ಮಾಹೆಯಲ್ಲಿ ನಡೆದ 2022-23ನೇ ಸಾಲಿನ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಳಿ ಜಾಲತಾಣದ ಶಾಲಾ ಲಾಗಿನ್‌ನಲ್ಲಿ ಅಪ್‌ಲೋಡ್ ಮಾಡಲಾಗುವುದು. ಪರೀಕ್ಷಾ ಫಲಿತಾಂಶವನ್ನು ಆಯಾ ಶಾಲೆಗಳ ಮುಖ್ಯಶಿಕ್ಷಕರು ಮಂಡಳಿಯ https://kseab.karnataka.gov.in ಜಾಲತಾಣದ ಶಾಲಾ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ತಮ್ಮ ಶಾಲೆಯಲ್ಲಿ ದಿನಾಂಕ:08.05.2023 ರಂದು ಮಧ್ಯಾಹ್ನ 01.00 ಘಂಟೆಗೆ ಪ್ರಕಟಿಸಲು ಸೂಚಿಸಿದೆ.

ವಿದ್ಯಾರ್ಥಿಗಳು ತಮ್ಮ ವೈಯಕ್ತಿಕ ಫಲಿತಾಂಶವನ್ನು **https://karresults.nic.in** ನಲ್ಲಿ ಪಡೆಯಬಹುದಾಗಿದೆ.

ಮಾರ್ಚ್/ಏಪ್ರಿಲ್ 2023ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯ ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್‌ಪ್ರತಿ, ಮರುಎಣಿಕೆ ಹಾಗೂ ಮರುಮೌಲ್ಯಮಾಪನಕ್ಕಾಗಿ ಅರ್ಜಿಸಲ್ಲಿ ಸಬಯಸುವ ಅಭ್ಯರ್ಥಿಗಳು **ಆನ್‌ಲೈನ್** ಮುಖಾಂತರ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ವೇಳಾ ಪಟ್ಟಿಯು ಈ ಕೆಳಕಂಡಂತಿದೆ.

| ವಿವರ | ನಿಗದಿಪಡಿಸಿದ ದಿನಾಂಕ |
|---|---|
| ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು **ಪ್ರಾರಂಭ** ದಿನಾಂಕ | 08.05.2023 |
| ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 14.05.2023 |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1 /ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 15.05.2023 |
| ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು **ಪ್ರಾರಂಭ** ದಿನಾಂಕ | 15.05.2023 |
| ಉತ್ತರ ಪತ್ರಿಕೆಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 21.05.2023 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು **ಪ್ರಾರಂಭ** ದಿನಾಂಕ | 15.05.2023 |
| ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು **ಅಂತಿಮ** ದಿನಾಂಕ | 21.05.2023 |
| ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಿದ ನಂತರ Offline ಚಲನ್ ಡೌನ್‌ಲೋಡ್ ಮಾಡಿಕೊಂಡು ಶುಲ್ಕವನ್ನು ಬಿ1/ಕೆ1/ಗ್ರಾಮ1/ಬ್ಯಾಂಕಿಗೆ ಪಾವತಿಸಲು **ಅಂತಿಮ** ದಿನಾಂಕ: | 22.05.2023 |

ನೇರವಾಗಿ ಮರು ಎಣಿಕೆಗಾಗಿ ಭೌತಿಕವಾಗಿ ಅರ್ಜಿ ಸಲ್ಲಿಸುವಂತಿಲ್ಲ. ಮರು ಎಣಿಕೆ ಬಯಸುವ ವಿದ್ಯಾರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಸ್ಕ್ಯಾನ್‌ಪ್ರತಿಯನ್ನು ಪಡೆಯಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗಾಗಿ ಅರ್ಜಿಯನ್ನು ಸಲ್ಲಿಸಬೇಕಾಗಿರುತ್ತದೆ. **ಮರುಎಣಿಕೆಗಾಗಿ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಗೊಳಿಸಲಾಗಿದೆ. ಮರುಎಣಿಕೆ ಬಯಸುವ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಮರುಎಣಿಕೆಯು ಉಚಿತವಾಗಿದ್ದು ಪ್ರತ್ಯೇಕ ಶುಲ್ಕವಿರುವುದಿಲ್ಲ.** ಮರುಎಣಿಕೆ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಪರಿಶೀಲಿಸಿ ಪರಿಷ್ಕೃತ ಫಲಿತಾಂಶ ಪಟ್ಟಿಯನ್ನು ಸಂಬಂಧಿಸಿದ ಶಾಲೆಗೆ ಹಾಗೂ ಎಸ್‌ಎಂಎಸ್ ಮೂಲಕ ವಿದ್ಯಾರ್ಥಿಗಳಿಗೆ ಮಾಹಿತಿಯನ್ನು ರವಾನಿಸಲಾಗುವುದು.

**ಸ್ಕ್ಯಾನ್‌ಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ.** ಮರುಎಣಿಕೆ ಅಥವಾ ಮರುಮೌಲ್ಯಮಾಪನ ಸೇವೆಯನ್ನು ಪಡೆಯಬೇಕಾದಲ್ಲಿ ಸ್ಕ್ಯಾನ್‌ಪ್ರತಿಯನ್ನು ಕಡ್ಡಾಯವಾಗಿ ಪಡೆಯಬೇಕಾಗಿರುತ್ತದೆ. ಸ್ಕ್ಯಾನ್‌ಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ (website address):- https://kseab.karnataka.gov.in ರಲ್ಲಿ ಮಾಹಿತಿ ಲಭ್ಯವಿದ್ದು ಸದರಿ ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ **ನಿಗದಿತ ಶುಲ್ಕವನ್ನು ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್ /ಆನ್‌ಲೈನ್ ಬ್ಯಾಂಕಿಂಗ್ (ಕರ್ನಾಟಕ-ಒನ್ ಪೋರ್ಟಲ್) ಮೂಲಕ ಪಾವತಿಸಿ ಅರ್ಜಿ** ಸಲ್ಲಿಸಬಹುದಾಗಿದೆ. **ಡೆಬಿಟ್ ಕಾರ್ಡ್/ಕ್ರೆಡಿಟ್ ಕಾರ್ಡ್/ ಆನ್‌ಲೈನ್ ಬ್ಯಾಂಕಿಂಗ್ ಸೌಲಭ್ಯವಿಲ್ಲದವರು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ಚಲನ್ ಡೌನ್‌ಲೋಡ್ ಮಾಡಿಕೊಂಡು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ/ಬೆಂಗಳೂರು-ಒನ್/ಕರ್ನಾಟಕ-ಒನ್ / ಗ್ರಾಮ1 ಸೇವಾ ಕೇಂದ್ರದಲ್ಲಿ ಶುಲ್ಕವನ್ನು ಪಾವತಿಸಬಹುದಾಗಿದೆ.** ಸ್ಕ್ಯಾನ್‌ಪ್ರತಿ / ಮರುಮೌಲ್ಯಮಾಪನಕ್ಕಾಗಿ ಮೇಲ್ಕಂಡಂತೆ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ನೋಂದಾಯಿಸಿದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮುಖಾಂತರ ಮಾಹಿತಿ ರವಾನೆಯಾಗುತ್ತದೆ.

ಮೇಲೆ ತಿಳಿಸಿರುವಂತೆ ಎಲ್ಲಾ ವಿಷಯಗಳ ಅಥವಾ ಅಪೇಕ್ಷಿತ ವಿಷಯದ ಸ್ಕ್ಯಾನ್‌ಪ್ರತಿ ಪಡೆದ ಅಭ್ಯರ್ಥಿಗಳು ಉತ್ತರ ಪತ್ರಿಕೆಯ ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಕೆಳಗೆ ನಿಗಧಿಪಡಿಸಿರುವ ನಿಗಧಿತ ಶುಲ್ಕದೊಡನೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು. ನಿಗಧಿತ ದಿನಾಂಕದ ನಂತರ ಸ್ಕ್ಯಾನ್‌ಪ್ರತಿ / ಮರುಮೌಲ್ಯಮಾಪನಕ್ಕಾಗಿ ಬರುವ ಅರ್ಜಿಗಳು ಆನ್‌ಲೈನ್‌ನಲ್ಲಿ ಸ್ವೀಕೃತವಾಗುವುದಿಲ್ಲ.

| **ಸ್ಕ್ಯಾನ್‌ಪ್ರತಿ ಮತ್ತು ಮರುಮೌಲ್ಯಮಾಪನ ಶುಲ್ಕದ ವಿವರ:** | | |
|---|---|---|
| **ವಿಧಾನ** | **ಸ್ಕ್ಯಾನ್‌ಪ್ರತಿ ಒಂದು ವಿಷಯಕ್ಕೆ** | **ಮರುಮೌಲ್ಯಮಾಪನ ಒಂದು ವಿಷಯಕ್ಕೆ** |
| Online ಮೂಲಕ ಕೆ1 ನಲ್ಲಿ ಪಾವತಿಸಿದಲ್ಲಿ ಶುಲ್ಕ | ರೂ. 410/-<br>ನಾಲ್ಕು ನೂರ ಹತ್ತು ರೂಪಾಯಿ<br>(400 ಶುಲ್ಕ + 10 ಸೇವಾ ಶುಲ್ಕ) | ರೂ. 810/-<br>ಎಂಟು ನೂರ ಹತ್ತು ರೂಪಾಯಿ<br>(800 ಶುಲ್ಕ + 10 ಸೇವಾ ಶುಲ್ಕ) |
| Offline ಚಲನ್ ಮೂಲಕ ಗ್ರಾಮ1, ಬಿ1 ಮತ್ತು ಕೆ1 ನಲ್ಲಿ ಪಾವತಿಸಿದಲ್ಲಿ ಶುಲ್ಕ | ರೂ. 420/-<br>ನಾಲ್ಕು ನೂರ ಇಪ್ಪತ್ತು ರೂಪಾಯಿ<br>(400 ಶುಲ್ಕ + 20 ಸೇವಾ ಶುಲ್ಕ) | ರೂ. 820/-<br>ಎಂಟು ನೂರ ಇಪ್ಪತ್ತು ರೂಪಾಯಿ<br>(800 ಶುಲ್ಕ + 20 ಸೇವಾ ಶುಲ್ಕ) |
| Offline ಚಲನ್ ಮೂಲಕ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ನಲ್ಲಿ ಪಾವತಿಸಿದಲ್ಲಿ ಶುಲ್ಕ | ರೂ. 410/-<br>ನಾಲ್ಕು ನೂರ ಹತ್ತು ರೂಪಾಯಿ<br>(400 ಶುಲ್ಕ + 10 ಸೇವಾ ಶುಲ್ಕ) | ರೂ. 810/-<br>ಎಂಟು ನೂರ ಹತ್ತು ರೂಪಾಯಿ<br>(800 ಶುಲ್ಕ + 10 ಸೇವಾ ಶುಲ್ಕ) |

**ಸ್ಕ್ಯಾನ್‌ಪ್ರತಿಗಾಗಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಸ್ಕ್ಯಾನ್ ಮಾಡಿ ಮಂಡಳಿಯ ಜಾಲತಾಣದಲ್ಲಿ ಅಪ್‌ಲೋಡ್ ಮಾಡಲಾಗುವುದು. ಉತ್ತರ ಪತ್ರಿಕೆಗಳನ್ನು ಅಪ್‌ಲೋಡ್ ಮಾಡಿದ ಮಾಹಿತಿಯನ್ನು**

**ವಿದ್ಯಾರ್ಥಿಗಳು ಅರ್ಜಿಯಲ್ಲಿ ನೀಡಿರುವ ಮೊಬೈಲ್ ಸಂಖ್ಯೆಗೆ ರವಾನಿಸಲಾಗುವುದು. ಸದರಿ ಮಾಹಿತಿ ಸ್ವೀಕೃತವಾದ ನಂತರ ವಿದ್ಯಾರ್ಥಿಗಳು ಉತ್ತರಪತ್ರಿಕೆಯನ್ನು ಮಂಡಳಿಯ ಜಾಲತಾಣದಿಂದ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿರುತ್ತದೆ.**

ಮಾರ್ಚ್/ಏಪ್ರಿಲ್ 2023ರ ಎಸ್.ಎಸ್.ಎಲ್.ಸಿ ಮುಖ್ಯ ಪರೀಕ್ಷೆಯ ಶಾಲಾವಾರು ಫಲಿತಾಂಶ ಪಟ್ಟಿಯನ್ನು ಮಂಡಳಿಯ https://kseab.karnataka.gov.in ಜಾಲತಾಣದ school ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಈ ಕೆಳಕಂಡ ಅಂಶಗಳ ಆಧಾರದ ಮೇಲೆ ಶಾಲೆಯ ಎಲ್ಲಾ ಅಭ್ಯರ್ಥಿಗಳ ಫಲಿತಾಂಶವನ್ನು ಮತ್ತು ಇತರೆ ಅಂಶಗಳನ್ನು ಕಡ್ಡಾಯವಾಗಿ ಪರಿಶೀಲಿಸಿ ಮುಂದಿನ ಅಗತ್ಯ ಕ್ರಮಕೈಗೊಳ್ಳಲು ತಿಳಿಸಿದೆ.

1. ಶಾಲೆಗೆ ಸಂಬಂಧಿಸಿದ ಎಲ್ಲಾ ವಿಧದ ಅಭ್ಯರ್ಥಿಗಳ ಫಲಿತಾಂಶ ಬಂದಿದೆಯೇ ಎಂಬುದನ್ನು ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.
2. ಒಂದು ವೇಳೆ ಯಾವುದಾದರೂ ಅಭ್ಯರ್ಥಿಯ ಫಲಿತಾಂಶ ಪ್ರಕಟವಾಗದಿದ್ದಲ್ಲಿ ಅಥವಾ ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ **10** ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಯ ಪರಿಶೀಲನಾಧಿಕಾರಿಗಳಿಗೆ ಪತ್ರ ಬರೆದು ಅಥವಾ ದೂರವಾಣಿ ಮೂಲಕ ಸಂಪರ್ಕಿಸಿದಲ್ಲಿ ಅಗತ್ಯ ಕ್ರಮಕೈಗೊಳ್ಳಲಾಗುವುದು.
3. ಫಲಿತಾಂಶ ಪಟ್ಟಿಯಲ್ಲಿ ಪುನರಾವರ್ತಿತ ಅಭ್ಯರ್ಥಿಗಳ ಪೈಕಿ ಯಾವುದಾದರೂ ಅಭ್ಯರ್ಥಿಯು ಹಿಂದೆ ಉತ್ತೀರ್ಣರಾದ ವಿಷಯದಲ್ಲಿ ಗೈರುಹಾಜರಿ ಎಂದು ನಮೂದಾಗಿದ್ದು ಫಲಿತಾಂಶ ಅನುತ್ತೀರ್ಣ ಅಥವಾ ತಡೆಹಿಡಿದಿದ್ದಲ್ಲಿ ಅಭ್ಯರ್ಥಿಯ ಹಿಂದಿನ ಪ್ರಯತ್ನಗಳಲ್ಲಿ (ಚುಕ್ಕೆ ಗುರುತಿಲ್ಲದ) ಉತ್ತೀರ್ಣರಾದ ಫಲಿತಾಂಶ ಪಟ್ಟಿಯ ಪ್ರತಿಯನ್ನು ದೃಢೀಕರಿಸಿ ಮುಖ್ಯ ಶಿಕ್ಷಕರು ಮಂಡಳಿಗೆ ಕಳುಹಿಸುವುದು. ಫಲಿತಾಂಶ ಪ್ರಕಟವಾದ ಹತ್ತು ದಿನಗಳೊಳಗಾಗಿ ಪರಿಷ್ಕರಣೆಗೆ ಪ್ರಸ್ತಾವನೆಯನ್ನು ಸಲ್ಲಿಸುವುದು.
4. ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿ ಪ್ರತಿಯೊಬ್ಬ ವಿದ್ಯಾರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶವೇ ಅಂತಿಮ ಎಂದು ಭಾವಿಸತಕ್ಕದ್ದು.
5. ಶಾಲಾವಾರು ಕ್ರೂಢೀಕೃತ ಫಲಿತಾಂಶ ಪಟ್ಟಿಯಲ್ಲಿನ ವಿದ್ಯಾರ್ಥಿಗಳ ವೈಯಕ್ತಿಕ ಫಲಿತಾಂಶದ ಕಾಲಂನಲ್ಲಿ ಉತ್ತೀರ್ಣತೆಗೆ **"P"** ಎಂದು ಮತ್ತು ಅನುತ್ತೀರ್ಣರಾದ ವಿದ್ಯಾರ್ಥಿಗೆ **"F"** ಎಂದು ನಮೂದಿಸಿ ಫಲಿತಾಂಶ ನೀಡಲಾಗಿದೆ.

**ಫಲಿತಾಂಶದ, ಮೌಲ್ಯಮಾಪನಗೊಂಡ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿ ಪಡೆಯುವ ಮತ್ತು ಮರು ಎಣಿಕೆ, ಮೌರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಕುರಿತು ಯಾವುದೇ ಮಾಹಿತಿ ಪಡೆಯಲು ಕೆಳಕಂಡ ಸಹಾಯವಾಣಿ ಸಂಖ್ಯೆಗಳಿಗೆ ಕರೆಮಾಡಿ ಮಾಹಿತಿ ಪಡೆಯಬಹುದಾಗಿರುತ್ತದೆ.**

**080– 23310075, 080– 23310076**

(ಹೆಚ್.ಎನ್.ಗೋಪಾಲಕೃಷ್ಣ)
ನಿರ್ದೇಶಕರು (ಪರೀಕ್ಷೆಗಳು)

ಇವರಿಗೆ:

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ. (ಈ ಮೇಲ್ ಮುಖಾಂತರ)

2. ರಾಜ್ಯದ ಎಲ್ಲಾ ಪ್ರೌಢ ಶಾಲಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ. (ಮಂಡಳಿಯ ಜಾಲತಾಣದ ಶಾಲಾ ಲಾಗಿನ್ ಮೂಲಕ)
3. ಶಾಖಾಧಿಕಾರಿಗಳು ಗಣಕಶಾಖೆರವರು ಶಾಲಾ ಲಾಗಿನ್‌ನಲ್ಲಿ ಮತ್ತು ಮಂಡಳಿ ವೆಬ್‌ಸೈಟ್‌ನಲ್ಲಿ ಈ ಸುತ್ತೋಲೆಯನ್ನು ಅಪ್‌ಲೋಡ್ ಮಾಡಲು ಸೂಕ್ತ ಕ್ರಮಕ್ಕಾಗಿ.
4. ಶಾಖಾಧಿಕಾರಿಗಳು ಬಿ, ಸಿ , ಲೆಕ್ಕಪತ್ರ ಶಾಖೆ ಮತ್ತು ಎಲ್ಲಾ ಪರಿಶೀಲನಾ ಶಾಖೆಗಳಿಗೆ ಸೂಕ್ತ ಕ್ರಮ್ಮಕಾಗಿ.
5. ಕಛೇರಿ ಪ್ರತಿ.